# All India Radio: Bangalore
# Regional Bulletin In Kannada
# 28.05.2025 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

**<><><><>**

ಮುಖ್ಯಾಂಶಗಳು

1. ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲ ಸೌಕರ್ಯ ಅಭಿವೃದ್ಧಿ ನಿಗಮದಿಂದ ಸರ್ಕಾರಕ್ಕೆ ಲಾಂಭಾಂಶದ ಚೆಕ್ ಹಸ್ತಾಂತರ
2. ರಾಜ್ಯಾದ್ಯಾಂತ ಮಳೆ ಅನಾಹುತ - ಅಧಿಕಾರಿಗಳಿಂದ ಮಾಹಿತಿ ಪಡೆದ ಮುಖ್ಯಮಂತ್ರಿ ಸಿದ್ಧರಾಮಯ್ಯ
3. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆಯುತ್ತಿರುವ ಅಹಿತಕರ ಘಟನೆ ಅಭಿವೃದ್ಧಿ ದೃಷ್ಟಿಯಿಂದ ಒಳ್ಳೆಯದಲ್ಲ - ಸಚಿವ ದಿನೇಶ್ ಗುಂಡೂರಾವ್
4. ಕನ್ನಡ ಎಂದಿಗೂ ವಿರಾಜಮಾನವಾಗಿರಲಿ - ಬೆಂಗಳೂರಿನಲ್ಲಿ ಬೂಕರ್ ಪ್ರಶಸ್ತಿ ಪುರಸ್ಕೃತ ಬಾನುಮುಷ್ತಾಕ್ ಅಭಿಮತ
5. ಬಿಬಿಎಂಪಿ ಮೂಲಕ ಸರ್ಕಾರದಿಂದ ಜನರ ತೆರಿಗೆ ಹಣ ದುರ್ಬಳಕೆ- ಬಿಜೆಪಿ ಆರೋಪ

<><><><>

ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯಾಭಿವೃದ್ಧಿ ನಿಗಮದ ವತಿಯಿಂದ ಇಂದು ೧೭ ಕೋಟಿ ೨೧ಲಕ್ಷದ ೫೬ಸಾವಿರದ ೮೩೯ ರೂಪಾಯಿಗಳ ಸಾಮಾನ್ಯ ಡಿವಿಡೆಂಡ್ ಹಾಗೂ ೬೮ಕೋಟಿ ೭೯ ಲಕ್ಷ ರೂಪಾಯಿಗಳ ವಿಶೇಷ ಡಿವಿಡೆಂಡ್ ಅನ್ನು ಹಸ್ತಾಂತರಿಸಲಾಗಿದೆ. ಇದೇ ವೇಳೆ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ೩ಕೋಟಿ ರೂಪಾಯಿಗಳ ಚೆಕ್ ನ್ನು ಕೈಗಾರಿಕಾ ಸಚಿವ ಎಂ. ಬಿ.ಪಾಟೀಲ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಇಂಧನ ಸಚಿವ ಕೆ.ಜೆ.ಜಾರ್ಜ್, ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದ ನಿರ್ದೇಶಕರಾದ ಎನ್ .ಮಂಜುಳಾ, ಖುಷ್ಬೂ ಗೋಯಲ್ ಚೌಧರಿ ಹಾಗೂ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><><>

ರಾಜ್ಯಾದ್ಯಂತ ಭಾರಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ತಕ್ಷಣ ಪ್ರವಾಹ ಪೀಡಿತ ಪ್ರದೇಶಗಳಿಗೆ ತೆರಳಿ ಪರಿಹಾರ ಕಾರ್ಯದ ಉಸ್ತುವಾರಿ ನೋಡಿಕೊಳ್ಳುವಂತೆ ಆಯಾ ಜಿಲ್ಲಾ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ಮಳೆಯಿಂದ ಆಗಿರುವ ಅನಾಹುತದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡ ಬಳಿಕ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದ್ದಾರೆ. ಇದೇ ೩೦, ೩೧ ರಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯನ್ನು ಕರೆಯುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಸೂಚನೆ ನೀಡಿದ್ದಾರೆ.

<><><><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆದಿರುವ ಕೊಲೆ ಪ್ರಕರಣ ನೋವಿನ ಸಂಗತಿಯಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಮಾತನಾಡಿದ ಅವರು ಪೊಲೀಸರಿಗೆ ಆರೋಪಿಗಳ ಸುಳಿವು ಸಿಕ್ಕಿದ್ದು ಶೀಘ್ರದಲ್ಲೇ ಬಂಧಿಸಲಾಗುವುದು ಎಂದು ಹೇಳಿದ್ದಾರೆ. ಕೋಮುವಾದ ಸಮಾಜವನ್ನು ವಿಭಜನೆ ಮಾಡಲಿದೆ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ. ಜಿಲ್ಲೆಯ ಅಭಿವೃದ್ಧಿಯ ದೃಷ್ಟಿಯಿಂದ ಇಂತಹ ಬೆಳವಣಿಗೆ ಒಳ್ಳೆಯದಲ್ಲ ಎಂದು ಹೇಳಿದ್ದಾರೆ. ಇದೇ ವೇಳೇ ಬಿಜೆಪಿ ನಾಯಕರ ರಾಜಕೀಯದ ವಿರುದ್ಧ ಅವರು ಅಸಮಾಧಾನ ವ್ಯಕ್ತ ಪಡಿಸಿದ್ದಾರೆ.

**ಧ್ವನಿ: ದಿನೇಶ್ ಗುಂಡೂರಾವ್**

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆದ ಅಹಿತಕರ ಘಟನೆಯ ಹಿನ್ನೆಲೆಯಲ್ಲಿ ಜಿಲ್ಲೆಯ ೫ ತಾಲ್ಲೂಕುಗಳಲ್ಲಿ ಮೇ ೩೦ರವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದು ಜಿಲ್ಲಾಡಳಿತ ಸ್ಪಷ್ಟ ಪಡಿಸಿದೆ.

<><><><>

ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ಪುರಸ್ಕೃತರಾದ ಬಾನು ಮುಷ್ತಾಕ್ ಲಂಡನ್ ನಿಂದ ಬೆಂಗಳೂರಿಗೆ ಆಗಮಿಸಿದ್ದಾರೆ. ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಾರ್ಯದರ್ಶಿ ಡಾ.ವೆಂಕಟೇಶ್ ಎಂ ವಿ ಹಾಗೂ ಇಲಾಖೆಯ ನಿರ್ದೇಶಕರಾದ ಕೆ ಎಂ ಗಾಯತ್ರಿ ಅದ್ದೂರಿ ಸ್ವಾಗತ ಕೋರಿ ಬರಮಾಡಿಕೊಂಡರು. ಡೊಳ್ಳು ಹಾಗೂ ಯಕ್ಷಗಾನ ತಂಡಗಳು ಅವರ ಸ್ವಾಗತಕ್ಕೆ ಸಾಕ್ಷಿಯಾದವು. ಬಳಿಕ ಮಾತಾನಾಡಿದ ಅವರು, ಕನ್ನಡ ಒಂದು ಮರವಾಗಿದ್ದು ತಾನು ಅದರ ಕೊಂಬೆಯಷ್ಟೇ ಎಂದು ತಿಳಿಸಿದ್ದಾರೆ. ಇಂಗ್ಲೆಂಡ್‌ನಲ್ಲಿಯೂ ಕನ್ನಡವನ್ನೂ ಸಂಭ್ರಮಿಸಲಾಗಿದ್ದು, ಕನ್ನಡ ಹೀಗೆ ವಿರಾಜಮಾನವಾಗಿರಬೇಕೆಂದು ಹೇಳಿದ್ದಾರೆ.

**ಧ್ವನಿ : ಬಾನು ಮುಷ್ತಾಕ್**

<><><><>

ರಾಜ್ಯದಲ್ಲಿ ಕೋವಿಡ್ ಪ್ರಕರಣಗಳು ಮರುಕಳಿಸಿದ ಹಿನ್ನೆಲೆಯಲ್ಲಿ ಮಕ್ಕಳು, ಬಾಣಂತಿಯರು, ವೃದ್ಧರು ಎಚ್ಚರಿಕೆಯಿಂದ ಇರಬೇಕು. ಜೊತೆಗೆ ಮಾಸ್ಕ್ ಧರಿಸಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಜನೌಷಧ

ಕೇಂದ್ರಗಳನ್ನು ಸರ್ಕಾರ ಮುಚ್ಚುತ್ತಿಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ೭೦೦ ಕ್ಕೂ ಹೆಚ್ಚು ಔಷಧಿಗಳನ್ನು ಉಚಿತವಾಗಿ ನೀಡಲಾಗುತ್ತಿದೆ. ಹೀಗಾಗಿ ಆಸ್ಪತ್ರೆ ಆವರಣದಲ್ಲಿನ ಜನೌಷಧ ಕೇಂದ್ರಗಳನ್ನು ತೆರವು ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

<><><>

ಕಾಂಗ್ರೆಸ್ ಪಕ್ಷ ಕಸದಲ್ಲಿ ರಸ ಮಾಡಲು ಯೋಜನೆ ತಂದಿದೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. 'ಬೆಂಗಳೂರಿನಲ್ಲಿ ದುಬಾರಿ ಬೆಲೆ ಏರಿಕೆ' ವಿರುದ್ಧ ಬಿಜೆಪಿ ನಿಯೋಗ ಇಂದು ಬಿಬಿಎಂಪಿ ಆಯುಕ್ತರಿಗೆ ಮನವಿ ಪತ್ರ ಸಲ್ಲಿಸಿದ ಬಳಿಕ ಮಾತನಾಡಿದ ಅವರು ಸರ್ಕಾರಕ್ಕೆ ರಾಜ್ಯದ ಜನರ ಬಗ್ಗೆ ಕಾಳಜಿ ಇಲ್ಲ ಎಂದು ಆರೋಪಿಸಿದ್ದಾರೆ. ಬಿಬಿಎಂಪಿ ಮೂಲಕ ಸರ್ಕಾರ ಜನರ ಹಣವನ್ನು  ದುರ್ಬಳಕೆ ಮಾಡುತ್ತಿದ್ದು ಕಳೆದ ಎರಡು ವರ್ಷಗಳಲ್ಲಿ ಅಭಿವೃದ್ಧಿ ಕಾರ್ಯಗಳೇ ನಡೆದಿಲ್ಲ. ಅಭಿವೃದ್ಧಿಗೆ ಹಣ ನೀಡದೆ ತೆರಿಗೆ ವಸೂಲಿ ಮಾಡಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

<><><>

ಧಾರವಾಡ ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿದ್ದು, ನೆರೆ ಪ್ರವಾಹ ಉಂಟಾಗುವ ಹಳ್ಳಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಕಾರ್ಮಿಕ  ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ. ಹುಬ್ಬಳ್ಳಿ ತಾಲೂಕಿನ ಶಿರಗುಪ್ಪಿ, ಇಂಗಳಹಳ್ಳಿ ಗ್ರಾಮಗಳಲ್ಲಿ ನೆರೆ ಪ್ರವಾಹ ಉಂಟಾಗುವ ಸಾಧ್ಯತೆ ಇರುವ ಪ್ರದೇಶಗಳಿಗೆ ಭೇಟಿ ನೀಡಿ, ಮಾತನಾಡಿದ ಅವರು, ನೆರೆ ಪ್ರವಾಹ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸ್ಪಷ್ಟ ಪಡಿಸಿದ್ದಾರೆ.  ಅತೀ ಹೆಚ್ಚು ಮಳೆಯಿಂದ ಬೆಣ್ಣೆ ಹಳ್ಳ ಹಾಗೂ ತುಪ್ಪರಿ ಹಳ್ಳಗಳು ಪ್ರವಾಹವನ್ನು ಉಂಟು ಮಾಡುತ್ತಿದ್ದು, ೨೦೦ ಕೋಟಿ ರೂಪಾಯಿ ಹಳ್ಳಗಳ ಹೂಳೆತ್ತುವ ಕಾರ್ಯವನ್ನು ಟೆಂಡರ್ ಪ್ರಕ್ರಿಯೆ ಮುಗಿದ ಬಳಿಕ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

<><><>

ರಾಜ್ಯದೆಲ್ಲೆಡೆ ನೇಮಕಾತಿ ಖಾಯಂಗೆ ಪೌರ ಕಾರ್ಮಿಕರು ಪ್ರತಿಭಟನೆ ನಡೆಸುತ್ತಿದ್ದು, ಅವರ ಸಮಸ್ಯೆ ಬಗೆಹರಿಸಲು ಶೀಘ್ರವೇ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಸಭೆ ಸೇರಿ ಪ್ರಾಮಾಣಿಕ ಪರಿಹಾರಕ್ಕೆ ಪ್ರಯತ್ನಿಸಲಾಗುವುದು ಎಂದು ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಂ ಖಾನ್ ತಿಳಿಸಿದ್ದಾರೆ. ಕಲಬುರ್ಗಿಯಲ್ಲಿ ಮಾತನಾಡಿದ ಅವರು, ಈಗಾಗಲೆ ಶೇಕಡ ೭೦ರಷ್ಟು ಪೌರಕಾರ್ಮಿಕರನ್ನು ಖಾಯಂ ಮಾಡಲಾಗಿದೆ. ಲೋಡರ್, ಪೌರ ಕಾರ್ಮಿಕರು, ಡ್ರೈವರ್ ಹೀಗೆ ಬಾಕಿ ಉಳಿದ ಶೇ.೩೦ರಷ್ಟು ನೌಕರರ ಖಾಯಂ ಬೇಡಿಕೆಯನ್ನು ಶೀಘ್ರವೇ ಈಡೇರಿಸಲಾಗುವುದು ಎಂದು ಹೇಳಿದ್ದಾರೆ.

<><><>

ಭ್ರಷ್ಟಾಚಾರ  ಕ್ಯಾನ್ಸರ್ ಗಿಂತಲೂ ಅಪಾಯಕಾರಿ ಕಾಯಿಲೆ ಎಂದು ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತ ಬಿ. ವೀರಪ್ಪ ಅಭಿಪ್ರಾಯಪಟ್ಟಿದ್ದಾರೆ. ಮಂಡ್ಯ ನಗರದ ಬಿ. ಆರ್ ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದ್ದ ಸಾರ್ವಜನಿಕರಿಂದ ದೂರು ಹಾಗೂ ಅಹವಾಲು ಸ್ವೀಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು. ಸಮಾಜ ಭ್ರಷ್ಟಾಚಾರದ ಹಾದಿಯಲ್ಲಿ ಸಾಗಿದರೆ ದೇಶದ ಅಭಿವೃದ್ಧಿಗೆ ಕಂಟಕವಾಗುತ್ತದೆ ಎಂದು ತಿಳಿಸಿದ್ದಾರೆ.

<><><><>

ಪರಿಶಿಷ್ಟ ಜಾತಿ ಒಳ ಮಿಸಲಾತಿ ಕುರಿತಂತೆ ದತ್ತಾಂಶ ಸಂಗ್ರಹಣೆಯ ಮನೆ-ಮನೆಗೆ ಭೇಟಿ ನೀಡಿ ಸಮೀಕ್ಷೆ ನಡೆಸುವ ಅವಧಿಯನ್ನು ನಾಳೆಯವರೆಗೆ ವಿಸ್ತರಿಸಲಾಗಿದೆ. ಗಣತಿದಾರರು ಜಿಲ್ಲೆಯ ಪರಿಶಿಷ್ಟ ಜಾತಿಯ ಯಾವುದೇ  ಕುಟುಂಬವು ಸಮೀಕ್ಷೆಯಿಂದ ಹೊರಗುಳಿಯದಂತೆ ಅತ್ಯಂತ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ವಿಜಯಪುರ ಜಿಲ್ಲಾಧಿಕಾರಿ ಟಿ. ಭೂಬಾಲನ್ ಸೂಚಿಸಿದ್ದಾರೆ. ಇದೇ ತಿಂಗಳ ೩೦, ೩೧ ಹಾಗೂ ಜೂನ್ ೦೧ ರಂದು ೩ ದಿನಗಳ ವಿಶೇಷ ಶಿಬಿರವನ್ನು ಏರ್ಪಡಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ರಾಜ್ಯದ ಕರಾವಳಿ ಕರ್ನಾಟಕದಾದ್ಯಂತ ನೈರುತ್ಯ ಮಾನ್ಸೂನ್ ತೀವ್ರವಾಗಿದ್ದು ಕರ್ನಾಟಕದ ಒಳನಾಡಿನಲ್ಲಿ ಸಕ್ರಿಯವಾಗಿತ್ತು. ಕರಾವಳಿ ಕರ್ನಾಟಕ ಮತ್ತು ಉತ್ತರ ಒಳನಾಡಿನ ಹೆಚ್ಚಿನ ಸ್ಥಳಗಳಲ್ಲಿ ಮಳೆಯಾಗಿದೆ. ಆಗುಂಬೆಯಲ್ಲಿ ೧೫, ಸೋಮವಾರಪೇಟೆಯಲ್ಲಿ ೧೩, ಸಿದ್ದಾಪುರದಲ್ಲಿ ೧೨ ಸೆಂ.ಮೀ. ಮಳೆಯಾಗಿದೆ. ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಯ ಕೆಲವು ಸ್ಥಳಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಉಡುಪಿ ಜಿಲ್ಲೆಯ ಒಂದು ಅಥವಾ ಎರಡು ಸ್ಥಳಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನ ಕೆಲವೆಡೆ ಹಗುರ ಮಳೆ ಸಾಧ್ಯತೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>